said that it may take at least three days to repair the stretch.

13-6-2018

# Wage revision for garment workers: meet on June 18

**BENGALURU:** Chief Minister H D Kumaraswamy has convened a meeting of representatives of Garment and Textile Workers Union (GATWU) and the manufacturers' association on June 18, to address the problems faced by the garment workers.

Kumaraswamy who held a meeting with representatives of the workers union on Tuesday, assured them that the government would try and meet their demands.

More than four lakh garment workers had planned an agitation demanding revision of minimum wages.

The Siddaramaiah government had issued a draft notification on wage revision in February, only to withdraw it the very next month, after the industry managements raised objections.

**DH News Service**

13 ಜೂನ್ 2018

# 18ಕ್ಕೆ ಗಾರ್ಮೆಂಟ್ ಕಾರ್ಖಾನೆಗಳ ನೌಕರರ ಜತೆಗೆ ಎಚ್‌ಡಿಕೆ ಸಭೆ

ಪ್ರಜಾವಾಣಿ ವಾರ್ತೆ



ಕುಮಾರಸ್ವಾಮಿ ಅವರನ್ನು ಸಿದ್ಧ ಉಡುಪು ಕಾರ್ಖಾನೆಗಳ ನೌಕರರ ಪ್ರತಿನಿಧಿಗಳು ಮಂಗಳವಾರ ಭೇಟಿ ಮಾಡಿದರು. ವೆಂಕಟರಮಣಪ್ಪ ಇದ್ದಾರೆ

ಬೆಂಗಳೂರು: ಸಿದ್ಧ ಉಡುಪು ಕಾರ್ಖಾನೆಗಳ ನೌಕರರಿಗೆ ಕನಿಷ್ಠ ವೇತನ ಹಾಗೂ ಇತರ ಸೌಲಭ್ಯವನ್ನು ಒದಗಿಸುವ ಸಂಬಂಧ ಇದೇ 18ರಂದು ಮುಖ್ಯಮಂತ್ರಿ ಎಚ್‌.ಡಿ. ಕುಮಾರಸ್ವಾಮಿ ಅವರು ಸಭೆ ನಿಗದಿಪಡಿಸಿದ್ದಾರೆ.

ಈ ಸಭೆಯಲ್ಲಿ ಸಿದ್ಧ ಉಡುಪು ಕಾರ್ಖಾನೆಗಳ ಮಾಲೀಕರ ಸಂಘ ಹಾಗೂ ನೌಕರರ ಸಂಘದ ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ.

ಗಾರ್ಮೆಂಟ್ಸ್ ಹಾಗೂ ಟೆಕ್ಸ್‌ಟೈಲ್ ನೌಕರರ ಸಂಘದ ಪ್ರತಿನಿಧಿಗಳು ಮುಖ್ಯಮಂತ್ರಿ ಗೃಹ ಕಚೇರಿ 'ಕೃಷ್ಣಾ'ದಲ್ಲಿ ಕುಮಾರಸ್ವಾಮಿ ಅವರನ್ನು ಮಂಗಳವಾರ ಭೇಟಿ ಮಾಡಿ ತಮ್ಮ ಅಹವಾಲುಗಳನ್ನು ಹೇಳಿಕೊಂಡರು.

'ಸಿದ್ಧ ಉಡುಪು ಕ್ಷೇತ್ರದಲ್ಲಿ ಬೆಂಗಳೂರು ಇಡೀ ದೇಶದಲ್ಲಿ ಹೆಸರಾಗಿದೆ. ಇಲ್ಲಿ ತಯಾರಾಗುತ್ತಿರುವ ವಸ್ತ್ರಗಳು ಅತ್ಯುತ್ತಮ ಮಟ್ಟ ಹಾಗೂ ವಿನ್ಯಾಸಗಳಿಂದ ಕೂಡಿವೆ. ಜಗತ್ತಿನ ನಾನಾ ದೇಶಗಳಿಗೆ ಇಲ್ಲಿ ತಯಾರಿಸಲಾದ ಉಡುಪುಗಳು ರಫ್ತಾಗುತ್ತಿವೆ. ಆದರೆ, ಈ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸುತ್ತಿರುವವರ ಬದುಕಿನ ಗುಣಮಟ್ಟ ಸುಧಾರಿಸಿಲ್ಲ. ಇವರಿಗೆ ಕನಿಷ್ಠ ವೇತನ ಹಾಗೂ ಅಗತ್ಯ ಅನುಕೂಲಗಳನ್ನು ಒದಗಿಸದಿರುವುದೇ ಇದಕ್ಕೆ ಕಾರಣ' ಎಂದು ಸಂಘದ ಪ್ರತಿನಿಧಿಗಳು ತಿಳಿಸಿದರು.

ಕುಮಾರಸ್ವಾಮಿ, 'ಎರಡೂ ಕಡೆಯ ಅಭಿಪ್ರಾಯ ಆಲಿಸಿ ಸೂಕ್ತ ನಿರ್ಧಾರ ಕೈಗೊಳ್ಳುತ್ತೇನೆ' ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕಾರ್ಮಿಕ ಸಚಿವ ವೆಂಕಟರಮಣಪ್ಪ, ಮುಖ್ಯಮಂತ್ರಿ ಅವರ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎನ್‌. ಲಕ್ಷ್ಮಿನಾರಾಯಣ, ಕಾರ್ಮಿಕ ಇಲಾಖೆಯ ಕಾರ್ಯದರ್ಶಿ ಅಮ್ಲಾನ್ ಆದಿತ್ಯ ಬಿಸ್ವಾಸ್, ಗಾರ್ಮೆಂಟ್ಸ್ ಹಾಗೂ ಟೆಕ್ಸ್‌ಟೈಲ್ ನೌಕರರ ಸಂಘದ ಅಧ್ಯಕ್ಷೆ ಪ್ರತಿಭಾ, ಸಂಘದ ಕಾನೂನು ಸಲಹೆಗಾರ ಜೈರಾಮ್ ಇದ್ದರು.

13 ಜೂನ್ 2018

# ಗಾರ್ಮೆಂಟ್ಸ್ ಸಮಸ್ಯೆ: 18ಕ್ಕೆ ಸಭೆ



ಬೇಡಿಕೆಗಳ ಈಡೇರಿಕೆ ಸಂಬಂಧ ಗೃಹ ಕಚೇರಿ ಕೃಷ್ಣಾದಲ್ಲಿ ಸಿಎಂ ಕುಮಾರಸ್ವಾಮಿ ಅವರಿಗೆ ಕಾರ್ಮಿಕ ಸಂಘಟನೆಗಳ ಪ್ರತಿನಿಧಿಗಳು ಮನವಿ ನೀಡಿದರು.

**ವಿಕಸುದ್ದಿಲೋಕ** ಬೆಂಗಳೂರು

ಗಾರ್ಮೆಂಟ್ಸ್ ನೌಕರರಿಗೆ ಕನಿಷ್ಠ ವೇತನ ನಿಗದಿ ಮಾಡುವುದಕ್ಕಾಗಿ ಇದೇ 18 ರಂದು ಕಾರ್ಖಾನೆ ಮಾಲೀಕರು ಹಾಗೂ ಕಾರ್ಮಿಕ ಸಂಘಟನೆಗಳ ಜತೆಗೆ ಸಭೆ ನಡೆಸಲು ಸಿಎಂ ಎಚ್.ಡಿ.ಕುಮಾರಸ್ವಾಮಿ ಸೂಚಿಸಿದ್ದಾರೆ.

ಗೃಹ ಕಚೇರಿ ಕೃಷ್ಣಾದಲ್ಲಿ ಗಾರ್ಮೆಂಟ್ಸ್ ನೌಕರರ ನಿಯೋಗದ ಮನವಿ ಆಲಿಸಿದ ಬಳಿಕ ಪ್ರತಿಭಟನೆ ಕೈ ಬಿಡುವಂತೆ ಮನವಿ ಮಾಡಿದ ಅವರು, ''ಆದಷ್ಟು ಶೀಘ್ರದಲ್ಲೇ ಈ ಸಮಸ್ಯೆ ಇತ್ಯರ್ಥಪಡಿಸುತ್ತೇನೆ. ಇದು ನಿಮ್ಮ ಸರಕಾರ. ಸಮಸ್ಯೆ ಹೇಳಿಕೊಳ್ಳಲು ಯಾವಾಗ ಬೇಕಾದರೂ ನನ್ನ ಬಳಿ ಬರಬಹುದು. ನಾನು ಮುಖ್ಯಮಂತ್ರಿಯಾಗಿರುವವರೆಗೆ ಯಾರೊಬ್ಬರೂ ಯಾವುದೇ ಸಮಸ್ಯೆಗಾಗಿ ಬೀದಿಗೆ ಇಳಿದು ಹೋರಾಟ ಮಾಡದೇ ಇರುವಂತೆ ನೋಡಿಕೊಳ್ಳಬೇಕೆಂಬುದು ನನ್ನ ಆಸೆ. ಈ ಹಿನ್ನೆಲೆಯಲ್ಲಿ ನಿಮ್ಮ ಸಮಸ್ಯೆಯನ್ನೂ ಆದಷ್ಟು ಬೇಗ ಪರಿಹರಿಸುತ್ತೇನೆ' ಎಂದು ಭರವಸೆ ನೀಡಿದರು.

**ಪ್ರಕರಣ ವಾಪಸ್‌ಗೆ ಆಗ್ರಹ:** ಕಳೆದ 2016ರಲ್ಲಿ ನಡೆದ ಕಾರ್ಮಿಕರ ಮುಷ್ಕರದ ವೇಳೆ 108 ಜನರ ವಿರುದ್ಧ ಪೊಲೀಸರು ಮೊಕದ್ದಮೆ ದಾಖಲಿಸಿದ್ದಾರೆ. ಮಂಡ್ಯ, ಶ್ರೀರಂಗಪಟ್ಟಣ, ಮದ್ದೂರಿನಲ್ಲೂ ಗಾರ್ಮೆಂಟ್ಸ್ ನೌಕರರ ವಿರುದ್ಧ ಪ್ರಕರಣ ದಾಖಲಾಗಿದೆ. ಸರಕಾರ ಈ ಮೊಕದ್ದಮೆಗಳನ್ನು ವಾಪಸ್ ಪಡೆಯಬೇಕೆಂದು ಈ ವೇಳೆ ಆಗ್ರಹಿಸಲಾಯಿತು. ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚಿಸಿ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಭರವಸೆ ನೀಡಿದರು.

13 ಜೂನ್ 2018

## ಗಾರ್ಮೆಂಟ್ಸ್ ಸಮಸ್ಯೆಗೆ ಜೂ.18ಕ್ಕೆ ಸಭೆ: ಸಿಎಂ ಎಚ್‌ಡಿಕೆ

# ವೇತನ ಹೆಚ್ಚಳಕ್ಕೆ ಕ್ರಮ

ದಿಗಂತ ಚಿತ್ರ



▸ ದಿಗಂತ ವರದಿ: ಬೆಂಗಳೂರು, ಜೂ.12

ವೇತನ ಹೆಚ್ಚಳ ಕುರಿತಂತೆ ಗಾರ್ಮೆಂಟ್ಸ್‌ಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರು ಮತ್ತು ಕಂಪೆನಿ ಮಾಲಿಕರ ಜತೆ ಮಾತುಕತೆ ನಡೆಸಲು ಜೂ.18 ರಂದು ನಗರದ ಸಿಎಂ ನಿವಾಸ ಕೃಷ್ಣಾದಲ್ಲಿ ಸಭೆ ನಡೆಯಲಿದೆ ಎಂದು ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ತಿಳಿಸಿದರು.

ಸಿಎಂ ನಿವಾಸ ಕೃಷ್ಣಾದಲ್ಲಿ ಮಂಗಳವಾರ ಗಾರ್ಮೆಂಟ್ಸ್ ಆ್ಯಂಡ್ ಟೆಕ್ಸ್‌ಟೈಲ್ ವರ್ಕರ್ಸ್ ಯೂನಿಯನ್ ಸಭೆ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಪ್ರಮುಖವಾದ ಉದ್ಯಮವಾದ ಗಾರ್ಮೆಂಟ್ಸ್ ಕಂಪೆನಿಗಳಲ್ಲಿ ಸುಮಾರು 5 ಲಕ್ಷಕ್ಕೂ ಹೆಚ್ಚು ಜನ ಕೆಲಸ ಮಾಡುತ್ತಿದ್ದು, ಇದರಲ್ಲಿ ಬಹುತೇಕ ಮಹಿಳೆಯರೇ ಹೆಚ್ಚಿದ್ದಾರೆ. ಇವರಿಗೆ ವೇತನ ಕಡಿಮೆ ನೀಡುವುದರಿಂದ ಸಮಸ್ಯೆಯಾಗುತ್ತಿದೆ. ಹೀಗಾಗಿ ಅವರ ಸಮಸ್ಯೆಗಳಿಗೆ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಿದರು.

ಸಮಸ್ಯೆ ಕುರಿತು ಸರ್ಕಾರದ ಗಮನಕ್ಕೆ ತರಲು ಬೃಹತ್ ಪ್ರತಿಭಟನೆ ಮಾಡುತ್ತಿರುವುದು ಕೇಳಿಬಂದಿದ್ದು, ತಕ್ಷಣವೇ ನಿಲ್ಲಿಸಬೇಕು. ಕಾರ್ಮಿಕರ ಏನೆ ಸಮಸ್ಯೆಗಳಿದ್ದರೂ ಬಗೆಹರಿಸಿಕೊಳ್ಳಬೇಕು. ಬೀದಿಗಿಳಿದು ಪ್ರತಿಭಟನೆ ಮಾಡೋದು ಬೇಡ. ಈಗ ನಮ್ಮ ಗಮನಕ್ಕೆ ಬಂದಿದೆ. ಇಬ್ಬರ ನಡುವಿನ ಸಮಸ್ಯೆ ಬಗೆಹರಿಸಲು ಸಮಗ್ರವಾಗಿ ಚರ್ಚೆ ಮಾಡಿ ಒಂದು ನಿರ್ಧಾರ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಹಿಂದೆ ನಡೆದ ಪ್ರತಿಭಟನೆಯಲ್ಲಿ ಕೆಲವು ಕಾರ್ಮಿಕರ ಮೇಲೆ ದೂರು ದಾಖಲಾಗಿದ್ದು, ಅವುಗಳ ಕುರಿತು ಮನವಿ ಸಲ್ಲಿಸಿದ್ದಾರೆ. ಅವುಗಳನ್ನು ಪರಿಶೀಲಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಸುನಿಲ್ ಬಿಸ್ವಾಸ್, ಸತ್ಯನಾರಾಯಣ ಉಪಸ್ಥಿತರಿದ್ದರು.

### ಪ್ರಯಾಣಕ್ಕೆ ಅನುಕೂಲ

**ರಾಜ್ಯದ ಹಲವೆಡೆ ಮಳೆ ಅವಾಂತರದಿಂದ ಕೆಲವು ಪ್ರಯಾಣಿಕರು ಗುಡ್ಡ ಕುಸಿತವಾಗಿದ್ದರಿಂದ ಕಾಡಿನಲ್ಲೇ ಉಳಿದಿರುವುದು ನನ್ನ ಗಮನಕ್ಕೆ ಬಂದಿದೆ. ಕೂಡಲೇ ಜೆಸಿಬಿಯಿಂದ ಕೆಲಸ ಆರಂಭಿಸಿ ಪ್ರಯಾಣಕ್ಕೆ ಅನುಕೂಲ ಮಾಡಿದೆ.**

■ ಎಚ್.ಡಿ.ಕುಮಾರಸ್ವಾಮಿ,
ಮುಖ್ಯಮಂತ್ರಿ

# ಗಾರ್ಮೆಂಟ್ಸ್ ಸಮಸ್ಯೆ ಕುರಿತು ಮುಖ್ಯಮಂತ್ರಿ ಚರ್ಚೆ

ಬೆಂಗಳೂರು: ಗಾರ್ಮೆಂಟ್ಸ್ ಕಾರ್ಖಾನೆಗಳಲ್ಲಿ ಕಾರ್ಯನಿರ್ವಹಿಸುವ ಕಾರ್ಮಿಕರಿಗೆ ವೇತನ ಹೆಚ್ಚಿಸುವ ಕುರಿತು ಗಾರ್ಮೆಂಟ್ಸ್ ಮಾಲೀಕರು ಹಾಗೂ ಕಾರ್ಮಿಕರೊಂದಿಗೆ ಜೂ.18ರಂದು ಸಭೆ ನಡೆಸಿ ಸೂಕ್ತ ಪರಿಹಾರಕ್ಕೆ ಪ್ರಯತ್ನಿಸಲಾಗುವುದು ಎಂದು ಸಿಎಂ ಎಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ.

ಗೃಹ ಕಚೇರಿ ಕೃಷ್ಣಾದಲ್ಲಿ ಮಂಗಳವಾರ ಗಾರ್ಮೆಂಟ್ಸ್ ಆ್ಯಂಡ್ ಟೆಕ್ಸ್ಟೈಲ್ ವರ್ಕರ್ಸ್ ಯೂನಿಯನ್ ಸದಸ್ಯರ ಜತೆ ಸಭೆ ನಡೆಸಿದ ನಂತರ ಸುದ್ದಿಗಾರರ ಜತೆ ಮಾತನಾಡಿದರು.

ರಾಜ್ಯದಲ್ಲಿ ಗಾರ್ಮೆಂಟ್ಸ್ ಉದ್ಯಮ ಪ್ರಮುಖವಾಗಿದ್ದು, 5 ಲಕ್ಷಕ್ಕೂ ಹೆಚ್ಚು ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ. ಬಹುತೇಕ ಮಹಿಳೆಯರೇ ಇರುವ ಉದ್ಯಮದಲ್ಲಿ ವೇತನ ಕಡಿಮೆಯಿರುವ ಕಾರಣ ಸಮಸ್ಯೆಯಾಗುತ್ತಿದೆ ಎಂದು ಕಾರ್ಮಿಕರು ತಿಳಿಸಿದ್ದಾರೆ. ಸರ್ಕಾರಕ್ಕೆ ವೇತನ ವಿಚಾರ ತಿಳಿಸಲು ಪ್ರತಿಭಟನೆ ಹಮ್ಮಿಕೊಳ್ಳುತ್ತಿರುವುದು ಗಮನಕ್ಕೆ ಬಂದಿದೆ. 18 ಅಥವಾ 19ರಂದು ಕಾರ್ಮಿಕರು ಹಾಗೂ ಗಾರ್ಮೆಂಟ್ಸ್ ಮಾಲೀಕರ ಸಭೆ ನಡೆಸಲಾಗುತ್ತದೆ. ಸಮಗ್ರವಾಗಿ ಚರ್ಚೆ ನಡೆಸಿ ಪರಿಹಾರ ಕಂಡುಕೊಳ್ಳಲಾಗುತ್ತದೆ ಎಂದು ಭರವಸೆ ನೀಡಿದರು. ಪಿಂಚಣಿ ಯೋಜನೆ ಕುರಿತು ನಡೆಸಿದ್ದ ಪ್ರತಿಭಟನೆಯಲ್ಲಿ ಗಾರ್ಮೆಂಟ್ಸ್ ಕಾರ್ಮಿಕರ ವಿರುದ್ಧ ದಾಖಲಾಗಿರುವ ಪ್ರಕರಣ ವಾಪಸ್ ಪಡೆಯಬೇಕು ಎಂಬ ಮನವಿ ಕುರಿತು ಪರಿಶೀಲನೆ ನಡೆಸಲಾಗುತ್ತದೆ ಎಂದು ಕುಮಾರಸ್ವಾಮಿ ತಿಳಿಸಿದರು.

» 18 ರಂದು ಮಾಲೀಕರು, ಕಾರ್ಮಿಕರ ಜತೆ ಸಭೆ

ಕಾರ್ಮಿಕ ಸಚಿವ ವೆಂಕಟರವಣಪ್ಪ, ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಲಕ್ಷ್ಮೀನಾರಾಯಣ, ಕಾರ್ಮಿಕ ಇಲಾಖೆ ಕಾರ್ಯದರ್ಶಿ ಅಮಲನ್ ಆದಿತ್ಯ ಬಿಸ್ವಾಸ್, ಗಾರ್ಮೆಂಟ್ಸ್ ಹಾಗೂ ಟೆಕ್ಸ್‌ಟೈಲ್ ನೌಕರರ ಸಂಘದ ಅಧ್ಯಕ್ಷೆ ಪ್ರತಿಭಾ ಸಭೆಯಲ್ಲಿದ್ದರು.

13-6-2018

# ಗಾರ್ಮೆಂಟ್ಸ್ ನೌಕರರ ಜತೆ ಸಿಎಂ ಸಭೆ 18ಕ್ಕೆ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಗಾರ್ಮೆಂಟ್ಸ್ ಮತ್ತು ಟೆಕ್ಸ್‌ಟೈಲ್ ನೌಕರರಿಗೆ ಕನಿಷ್ಠ ವೇತನ ನಿಗದಿಪಡಿಸುವ ಕುರಿತು ಚರ್ಚಿಸಲು ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು ಸಂಬಂಧಪಟ್ಟ ಇಲಾಖೆಗಳು ಮತ್ತು ಕಾರ್ಮಿಕ ಮುಖಂಡರ ಸಭೆಯನ್ನು ಜೂನ್ 18ಕ್ಕೆ ನಡೆಸಲಿದ್ದಾರೆ.

ನಗರದಲ್ಲಿ ಮಂಗಳವಾರ ಗಾರ್ಮೆಂಟ್ಸ್ ಮತ್ತು ಟೆಕ್ಸ್‌ಟೈಲ್ ನೌಕರರ ಸಂಘದ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿ ಮನವಿ ಸ್ವೀಕರಿಸಿದ ಕುಮಾರಸ್ವಾಮಿ ಈ ವಿಷಯ ಪ್ರಕಟಿಸಿದ್ದಾರೆ.

ಸಭೆಯ ನಂತರ ಮಾತನಾಡಿದ ಅವರು, ಗಾರ್ಮೆಂಟ್ಸ್ ಉದ್ಯಮದ ಮೂಲಕ ರಾಜ್ಯದಲ್ಲಿ ನಾಲ್ಕು ಲಕ್ಷ ಉದ್ಯೋಗಗಳನ್ನು ಸೃಷ್ಟಿಸುವ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಮಾಲೀಕರು ಮತ್ತು ಕಾರ್ಮಿಕರನ್ನು ಒಟ್ಟಾಗಿ ಕರೆದು ಸಭೆ ನಡೆಸಿ ಕಾರ್ಮಿಕರಿಗೆ ಕನಿಷ್ಠ ವೇತನ ನಿಗದಿಪಡಿಸುವ ಬಗ್ಗೆ ನಿರ್ಧಾರಕ್ಕೆ ಬರಲಾಗುವುದು ಎಂದು ಭರವಸೆ ನೀಡಿದರು. ಈ ವೇಳೆ ಮಾತನಾಡಿದ ಕಾರ್ಮಿಕರ ಸಂಘದ ಪ್ರಮುಖರು, ಗಾರ್ಮೆಂಟ್ಸ್ ಕ್ಷೇತ್ರದಲ್ಲಿ ಬೆಂಗಳೂರಿಗೆ ಉತ್ತಮವಾದ ಹೆಸರಿದ್ದು, ತಯಾರಾಗುತ್ತಿರುವ ವಸ್ತ್ರಗಳು ಅತ್ಯುತ್ತಮ ಗುಣಮಟ್ಟ ಹಾಗೂ ವಿನ್ಯಾಸಗಳಿಂದ ಕೂಡಿವೆ. ಪ್ರಪಂಚದ ವಿವಿಧ ದೇಶಗಳಿಗೆ ಇಲ್ಲಿಂದ ಉಡುಪುಗಳು ರಫ್ತಾಗುತ್ತಿವೆ. ಆದರೆ ಈ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸುತ್ತಿರುವವರು ಕಡಿಮೆ ವೇತನ ಪಡೆದು ಕಷ್ಟದಲ್ಲಿ ಜೀವನ ಸಾಗಿಸಬೇಕಾದ ಪರಿಸ್ಥಿತಿ ಎದುರಾಗಿದೆ. ಈ ಹಿನ್ನೆಲೆಯಲ್ಲಿ ಕನಿಷ್ಠ ವೇತನ ಹಾಗೂ ಅಗತ್ಯ ಅನುಕೂಲಗಳನ್ನು ಒದಗಿಸುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿರುವುದಾಗಿ ತಿಳಿಸಿದರು. ಕಾರ್ಮಿಕ ಸಚಿವ ವೆಂಕಟರಮಣಪ್ಪ, ಸರಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎನ್. ಲಕ್ಷ್ಮೀನಾರಾಯಣ, ಕಾರ್ಮಿಕ ಇಲಾಖೆ ಕಾರ್ಯದರ್ಶಿ ಆದಿತ್ಯ ಬಿಸ್ವಾಸ್, ಗಾರ್ಮೆಂಟ್ಸ್ ಹಾಗೂ ಟೆಕ್ಸ್‌ಟೈಲ್ ನೌಕರರ ಸಂಘದ ಅಧ್ಯಕ್ಷೆ ಪ್ರತಿಭಾ, ಕಾನೂನು ಸಲಹೆಗಾರ ಜೈರಾಮ್ ಇದ್ದರು.



ಗಾರ್ಮೆಂಟ್ಸ್ ಮತ್ತು ಟೆಕ್ಸ್‌ಟೈಲ್ಸ್ ನೌಕರರ ವೇತನ ಪರಿಷ್ಕರಣೆ ಬಗ್ಗೆ ಸಿಎಂ ಕುಮಾರಸ್ವಾಮಿ ಅವರು ನೌಕರರ ಸಂಘದ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿದರು. ಕಾರ್ಮಿಕ ಸಚಿವ ವೆಂಕಟರಮಣಪ್ಪ ಸೇರಿದಂತೆ ಇಲಾಖೆ ಅಧಿಕಾರಿಗಳು ಇದ್ದರು.

- ನೌಕರರಿಗೆ ಕನಿಷ್ಠ ವೇತನ ನಿಗದಿ ಮಾಡುವ ಸಂಬಂಧ ಚರ್ಚೆ
- ಮೂಲ ಸೌಲಭ್ಯ ಪೂರೈಕೆ ಕುರಿತು ನಿರ್ಧಾರ ಸಾಧ್ಯತೆ
- ಗಾರ್ಮೆಂಟ್ಸ್ ಮಾಲೀಕರು, ಕಾರ್ಮಿಕ ಮುಖಂಡರು ಭಾಗಿ

13-6-2018.

# 18ಕ್ಕೆ ಗಾರ್ಮೆಂಟ್ಸ್, ಟೆಕ್ಸ್‌ಟೈಲ್ ಮಾಲೀಕರ, ನೌಕರರ ಸಭೆ: ಸಿಎಂ

## ಕನಿಷ್ಠ ವೇತನ, ಇತರ ಸೌಲಭ್ಯದ ಬಗ್ಗೆ ಚರ್ಚೆ: ಎಚ್.ಡಿ.ಕುಮಾರಸ್ವಾಮಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಗಾರ್ಮೆಂಟ್ಸ್ ಹಾಗೂ ಟೆಕ್ಸ್‌ಟೈಲ್ ನೌಕರರಿಗೆ ಕನಿಷ್ಠ ವೇತನ ಹಾಗೂ ಇತರ ಸೌಲಭ್ಯಗಳನ್ನು ಒದಗಿಸುವ ಸಂಬಂಧ ಇದೇ ತಿಂಗಳ 18ರಂದು ಗಾರ್ಮೆಂಟ್ಸ್ ಹಾಗೂ ಟೆಕ್ಸ್‌ಟೈಲ್ ಮಾಲೀಕರ ಸಂಘ ಹಾಗೂ ನೌಕರರ ಸಂಘದ ಪ್ರತಿನಿಧಿಗಳ ಸಭೆಯನ್ನು ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ನಿಗದಿಪಡಿಸಿದ್ದಾರೆ.

ಗಾರ್ಮೆಂಟ್ಸ್ ಹಾಗೂ ಟೆಕ್ಸ್‌ಟೈಲ್ ನೌಕರರ ಸಂಘದ ಪ್ರತಿನಿಧಿಗಳು ಮಂಗಳವಾರ ಮುಖ್ಯಮಂತ್ರಿ ಕುಮಾರಸ್ವಾಮಿ ಅವರನ್ನುಅವರಗೃಹಕಚೇರಿ 'ಕೃಷ್ಣಾ'ದಲ್ಲಿ ಭೇಟಿ ಮಾಡಿ ತಮ್ಮ ಅಹವಾಲುಗಳನ್ನು ಹೇಳಿಕೊಂಡರು.

ಬೆಂಗಳೂರು ನಗರ ಗಾರ್ಮೆಂಟ್ಸ್ ಕ್ಷೇತ್ರ ದೇಶದಲ್ಲೇ ಖ್ಯಾತಿ ಗಳಿಸಿದೆ. ಇಲ್ಲಿ ತಯಾರಾಗುವ ವಸ್ತ್ರಗಳು ಅತ್ಯುತ್ತಮ ಗುಣಮಟ್ಟ ಹಾಗೂ ವಿನ್ಯಾಸಗಳಿಂದ ಕೂಡಿದೆ.

ಇಲ್ಲಿ ತಯಾರಿಸಲಾದ ವಸ್ತ್ರಗಳು ಜಗತ್ತಿನನಾನಾದೇಶಗಳಿಗೆರಫ್ತಾಗುತ್ತಿವೆ.



ಗಾರ್ಮೆಂಟ್ಸ್ ಹಾಗೂ ಟೆಕ್ಸ್‌ಟೈಲ್ ನೌಕರರ ಸಂಘದ ಪ್ರತಿನಿಧಿಗಳು ಮಂಗಳವಾರ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರನ್ನು ಅವರ ಗೃಹ ಕಚೇರಿ ಕೃಷ್ಣಾದಲ್ಲಿ ಭೇಟಿ ಮಾಡಿದ ಸಂದರ್ಭದಲ್ಲಿ ಕೆಲವು ನೌಕರರು ಮುಖ್ಯಮಂತ್ರಿ ಅವರೊಂದಿಗೆ ಸೆಲ್ಫಿ ಫೋಟೋ ತೆಗೆದು ಸಂಭ್ರಮಿಸಿದರು.

ಆದರೆ, ಈ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸುತ್ತಿರುವವರ ಬದುಕಿನ ಗುಣಮಟ್ಟ ಸುಧಾರಿಸಿಲ್ಲ. ಅವರಿಗೆ ಕನಿಷ್ಠ ವೇತನ ಹಾಗೂ ಮೂಲಭೂತ ಸೌಕರ್ಯಗಳನ್ನು ಕೂಡಒದಗಿಸಿಲ್ಲ. ಇದರಿಂದಕಾರ್ಮಿಕರು ಬಡತನದಲ್ಲಿ ಬದುಕುವ ಪರಿಸ್ಥಿತಿ ಇದೆ.

ಹಲವು ವರ್ಷಗಳಿಂದ ಕಾರ್ಮಿಕರ ವೇತನವನ್ನು ಕೂಡ ಹೆಚ್ಚಿಸಿಲ್ಲ ಎಂದು ಸಂಘದ ಮುಖ್ಯಸ್ಥರು ಮುಖ್ಯಮಂತ್ರಿಗಳಿಗೆ ತಿಳಿಸಿದರು. ಸಮಸ್ಯೆಗಳನ್ನು ಆಲಿಸಿದ ನಂತರ ಮಾತನಾಡಿದ ಮುಖ್ಯಮಂತ್ರಿ ಕುಮಾರಸ್ವಾಮಿ, ಜೂ.18ರಂದು ಕಾರ್ಮಿಕರು ಮತ್ತು ಟೆಕ್ಸ್‌ಟೈಲ್ ಮಾಲೀಕರಸಭೆನಡೆಸಿ ಸಮಸ್ಯೆ ಇತ್ಯರ್ಥಕ್ಕೆಸಹಕಾರನೀಡುತ್ತೇನೆ. ಅಧಿಕಾರಿಗಳುಕೂಡಲೇಈದಿನಾಂಕದಂಥ ಎರಡು ಸಂಘಟನೆಗಳ ಮುಖಂಡರು ಸಭೆಗೆಬರುವಂತೆಕರೆನೀಡಬೇಕು ಎಂದು ಸೂಚಿಸಿದ ಮುಖ್ಯಮಂತ್ರಿಗಳು, ನ್ಯಾಯಯುತ ಬೇಡಿಕೆ ಈಡೇರಿಸುವ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಕಾರ್ಮಿಕ ಸಚಿವ ವೆಂಕಟರಮಣಪ್ಪ, ಹೆಚ್ಚುವರಿ ಮುಖ್ಯಕಾರ್ಯದರ್ಶಿ ಎನ್.ಲಕ್ಷ್ಮೀನಾರಾಯಣ್, ಕಾರ್ಮಿಕಇಲಾಖೆ ಕಾರ್ಯದರ್ಶಿಅಮ್ಲನ್ಆದಿತ್ಯಬಿಸ್ವಾಸ್, ಗಾರ್ಮೆಂಟ್ಸ್ ಹಾಗೂ ಟೆಕ್ಸ್‌ಟೈಲ್ ನೌಕರರ ಸಂಘದ ಅಧ್ಯಕ್ಷೆ ಪ್ರತಿಭಾ, ಸಂಘದಕಾನೂನುಸಲಹೆಗಾರಜೈರಾಮ್ ಹಾಗೂ ಇತರರು ಉಪಸ್ಥಿತರಿದ್ದರು.

ಅಭಿನಂದಿಸಿದರು. ದೊಡ್ಡರಸಿನಕೆರೆ ಅಂಗಡಿ ಕೃಷ್ಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

12-6-2018

# ಗಾರ್ಮೆಂಟ್ಸ್ ಕಾರ್ಮಿಕರ ಮುಷ್ಕರಕ್ಕೆ ತಾತ್ಕಾಲಿಕ ಬ್ರೇಕ್

**ಟೆಕ್ಸ್‌ಟೈಲ್ ವರ್ಕರ್ಸ್ ಯೂನಿಯನ್ 14ರಂದು ಪ್ರತಿಭಟನೆಗೆ ಕರೆನೀಡಿತ್ತು | ದಿನಾಂಕ ತಪ್ಪಾಗಿ ಅರ್ಥೈಸಿ ಸೋಮವಾರವೇ ಶಾಹಿ ಗಾರ್ಮೆಂಟ್ಸ್ ಎದುರು ಧರಣೆಗೆ ಮುಂದಾದ ಕಾರ್ಮಿಕರು**

• **ಕನ್ನಡಪ್ರಭ ವಾರ್ತೆ** ಮದ್ದೂರು

ಕನಿಷ್ಠವೇತನನಿಗದಿ, ವೇತನ ಭತ್ಯೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ತಾಲೂಕಿನ ಗೆಜ್ಜಲಗೆರೆಯ ಶಾಹಿ ಗಾರ್ಮೆಂಟ್ಸ್ ಕಾರ್ಮಿಕರು ಹಮ್ಮಿಕೊಂಡಿದ್ದ ಮುಷ್ಕರವನ್ನು ತಾತ್ಕಾಲಿಕವಾಗಿ ಮುಂದೂಡಿದ್ದಾರೆ.

ಬೇಡಿಕೆಈಡೇರಿಕೆಕುರಿತಂತೆಗಾರ್ಮೆಂಟ್ಸ್ ಮತ್ತು ಟೆಕ್ಸ್‌ಟೈಲ್ ವರ್ಕರ್ಸ್ ಯೂನಿಯನ್ ಸ್ಥಳೀಯ ಸಂಘಟನೆ ಜೂ. 14ರಂದು ನೌಕರರ ಮುಷ್ಕರಕ್ಕೆ ಕರೆ ನೀಡಿತ್ತು. ಮುಷ್ಕರದ ಕರೆಯನ್ನು ತಪ್ಪಾಗಿ ಅರ್ಥೈಸಿಕೊಂಡ ಗೆಜ್ಜಲಗೆರೆ ಶಾಹಿ ಗಾರ್ಮೆಂಟ್ಸ್‌ನ ನೂರಾರುಕಾರ್ಮಿಕರುಸೋಮವಾರವೇಕಾರ್ಖಾನೆ ಎದುರು ಮುಷ್ಕರ ನಡೆಸಲು ಮುಂದಾಗಿದ್ದರು.

ಈಹಿಂದೆನಡೆದಶಾಹಿಗಾರ್ಮೆಂಟ್ಸ್‌ನಕಾರ್ಮಿಕರ ಮುಷ್ಕರವಿಕೋಪಕ್ಕೆತಿರುಗಿಬೆಂಗಳೂರು-ಮೈಸೂರು ಹೆದ್ದಾರಿಯಲ್ಲಿ ಪ್ರತಿಭಟನೆ ನಡೆಸಿದ್ದರು. ಇದರಿಂದ ಇಡೀ ದಿನ ವಾಹನ ಸಂಚಾರ ಅಸ್ತವ್ಯಸ್ತಗೊಂಡಿತ್ತು. ಇದರಿಂದ ಎಚ್ಚೆತ್ತ ಪೊಲೀಸರು ಕಾರ್ಮಿಕರ ಮುಷ್ಕರ ಈ ಬಾರಿ ತೀವ್ರ ಸ್ವರೂಪ ಪಡೆದುಕೊಳ್ಳುವ ಸಾಧ್ಯತೆ ಹಿನ್ನೆಲೆಯಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಮಾಡಿದ್ದರು.

ನಾಲ್ಕುದಿನಮೊದಲೇಕಾರ್ಮಿಕರುಮುಷ್ಕರಕ್ಕಿಳಿದ ವಿಷಯ ತಿಳಿದ ಕಾರ್ಮಿಕ ಸಂಘಟನೆಯ ಮುಖಂಡರಾದ ಉಮೇಶ್, ಸವಿತಾರಾಣಿ, ಬಾನುಪ್ರಕಾಶ್, ಪ್ರಶಾಂತ್, ಶೃತಿ, ರಮ್ಯಾ, ರುಮೀತಾ ಧರಣಿ ನಿರತ ಕಾರ್ಮಿಕರೊಂದಿಗೆ ಮಾತುಕತೆ ನಡೆಸಿ ಮುಷ್ಕರ ಕೈಬಿಟ್ಟು ಕಾರ್ಮಿಕರು ಕೆಲಸಕ್ಕೆ ಹಾಜರಾಗುವಂತೆ ಮಾಡುವಲ್ಲಿ ಸಫಲರಾದರು.



ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿ. ರಾಧಿಕಾ ತಾಲೂಕಿನ ಗೆಜ್ಜಲಗೆರೆಯ ಶಾಹಿ ಗಾರ್ಮೆಂಟ್ಸ್ ಕಾರ್ಖಾನೆಗೆ ಭೇಟಿ ನೀಡಿ ಆಡಳಿತ ಮಂಡಳಿ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು.

ಕಾರ್ಮಿಕರ ಮುಷ್ಕರ ಕುರಿತಂತೆ ಸುದ್ದಿಗಾರರೊಂದಿಗೆ ಮಾತನಾಡಿದ ಗಾರ್ಮೆಂಟ್ಸ್ ಸಂಘಟನೆ ಜಂಟಿ ಕಾರ್ಯದರ್ಶಿ, ಎನ್.ಎಲ್.ಉಮೇಶ್, ಕಾರ್ಮಿಕರ ಕನಿಷ್ಠ ವೇತನ ನಿಗದಿ, ವೇತನ ಭತ್ಯೆ ಹಾಗೂ ಮೂಲ ಭೂತ ಸೌಲಭ್ಯಗಳ ಕುರಿತಂತೆ ಜೂ. 12ರಂದು ಮುಖ್ಯಮಂತ್ರಿಗಳ ಸಮ್ಮುಖದಲ್ಲಿ ಮಾತುಕತೆ ನಡೆಸಲಾಗುವುದು. ಆನಂತರಸಭೆಯತೀರ್ಮಾನದ ನಂತರ ಮುಂದಿನ ಹೋರಾಟ ರೂಪಿಸಲಾಗುವುದು ಎಂದು ಹೇಳಿದರು.

ಬೆಂಗಳೂರಿನಲ್ಲಿರುವ ಬೃಹತ್ ಕಾರ್ಖಾನೆಗಳಾದ ಶಾಹಿ ಎಕ್ಸ್‌ಪೋರ್ಟ್, ಗೋಕುಲ್ ದಾಸ್, ಜಾಕಿ, ಟೆಕ್ಸ್ ಬೋರ್ಡ್, ಕ್ರಿಯೇಷ್ ಹಾಗೂ ಕೆ. ಮೋಹನ್ ದಾಸ್ ಸೇರಿದಂತೆ ರಾಜ್ಯಾದ್ಯಂತ ಸುಮಾರು 70 ಗಾರ್ಮೆಂಟ್ಸ್ ಕಾರ್ಖಾನೆಗಳುಕಾರ್ಯನಿರ್ವಹಿಸುತ್ತಿವೆ. ಇಂತಹ ಕಾರ್ಖಾನೆಯಲ್ಲಿ ಸುಮಾರು 3 ರಿಂದ 4 ಲಕ್ಷ ಮಂದಿ ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ.

## ಕಾರ್ಖಾನೆಗೆ ಎಸ್ಪಿ ಜಿ.ರಾಧಿಕಾ ಭೇಟಿ, ಚರ್ಚೆ

ಶಾಹಿ ಗಾರ್ಮೆಂಟ್ಸ್ ನೌಕರರು ತಮ್ಮ ಬೇಡಿಕೆ ಈಡೇರಿಕೆ ಕುರಿತಂತೆ ಮುಷ್ಕರಕ್ಕೆ ಕರೆ ನೀಡಿರುವ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿ. ರಾಧಿಕಾ ತಾಲೂಕಿನ ಗೆಜ್ಜಲಗೆರೆಯ ಶಾಹಿ ಗಾರ್ಮೆಂಟ್ಸ್ ಕಾರ್ಖಾನೆಗೆ ಭೇಟಿನೀಡಿ ಆಡಳಿತ ಮಂಡಳಿಅಧಿಕಾರಿಗಳೊಂದಿಗೆಚರ್ಚೆನಡೆಸಿದರು. ಎಎಸ್ಪಿ ಲಾವಣ್ಯ, ಡಿವೈಎಸ್ಪಿ ಮಲ್ಲಿಕ್, ಸಿಪಿಐ ಪ್ರೀತಂ ಶ್ರೇಯಾಂಕರ್ ಹಾಗೂ ಪಿಎಸ್ಐ ಕುಮಾರ್ ಅವರೊಂದಿಗೆ ಕಾರ್ಖಾನೆಗೆ ಭೇಟಿ ನೀಡಿದ ರಾಧಿಕಾ ಅವರು, ಆಡಳಿತ ಮಂಡಳಿ ಮುಖ್ಯಸ್ಥರೊಂದಿಗೆ ಮಾತುಕತೆ ನಡೆಸಿದರು.

ಕಾರ್ಮಿಕರಿಗೆ ಕನಿಷ್ಠ ವೇತನ ನಿಗದಿ, ವೇತನ ಭತ್ಯೆ ಸೇರಿದಂತೆಹಲವು ಬೇಡಿಕೆಗಳಕುರಿತು ಶಾಹಿ ಗಾರ್ಮೆಂಟ್ಸ್‌ನ ಉತ್ಪಾದನಾ ವಿಭಾಗದ ಪ್ರಧಾನ ವ್ಯವಸ್ಥಾಪಕ ಗಿರೀಶ್ ಸೇರಿದಂತೆ ಹಲವು ಅಧಿಕಾರಿಗಳೊಂದಿಗೆ ಸುಮಾರು 45 ನಿಮಿಷಗಳ ಕಾಲ ಚರ್ಚೆನಡೆಸಿದರು. ಕಾರ್ಮಿಕರುಮುಷ್ಕರಕ್ಕೆ ಇಳಿದಲ್ಲಿಕಾನೂನುಸುವ್ಯವಸ್ಥೆಗೆಧಕ್ಕೆಉಂಟಾಗುವ ಸಾಧ್ಯತೆ ಇರುವುದರಿಂದ ಅವರ ಸಮಸ್ಯೆಗಳ ಕುರಿತಂತೆ ಚರ್ಚಿಸಿ ಶೀಘ್ರವಾಗಿ ಬಗೆಹರಿಸಲು ಆಡಳಿತ ಮಂಡಳಿ ಪ್ರಾಮಾಣಿಕ ಪ್ರಯತ್ನ ನಡೆಸಬೇಕು ಎಂದು ಮನವಿ ಮಾಡಿದರು.

ಕಾರ್ಮಿಕರ ಬೇಡಿಕೆ ಈಡೇರಿಸುವಂತೆ ಹಲವು ವರ್ಷಗಳಿಂದ ಒತ್ತಾಯಿಸಿದ್ದರೂ ಸಹ ಕಾರ್ಖಾನೆಗಳ ಆಡಳಿತ ಮಂಡಳಿಗಳು ಯಾವುದೇ ಕ್ರಮ ಕೈಗೊಂಡಿರಲಿಲ್ಲ ಎಂದು ಆರೋಪಿಸಿದರು.

2017ರಲ್ಲಿ ರಾಜ್ಯ ಸರ್ಕಾರ ಬೆಂಗಳೂರು ಗಾರ್ಮೆಂಟ್ಸ್ ಕಾರ್ಖಾನೆಹೊರತುಪಡಿಸಿಗ್ರಾಮೀಣ ಭಾಗದ ಕಾರ್ಖಾನೆಗಳ ಕಾರ್ಮಿಕರಿಗೆ 10,010 ರು. ಕನಿಷ್ಠ ವೇತನ ಹಾಗೂ ವೇತನ ಭತ್ಯೆ ನಿಗಧಿ ಮಾಡಿ ಕರಡು ಆದೇಶ ಹೊರಡಿಸಿತ್ತು. ಆದರೆ ಗಾರ್ಮೆಂಟ್ಸ್ ಕಾರ್ಖಾನೆ ಆಡಳಿತ ಮಂಡಳಿಗಳು ವೇತನ ಪದ್ಧತಿಗೆ ಅಡ್ಡಿಪಡಿಸಿ ಸರ್ಕಾರದಿಂದ ತಡೆಯಾಜ್ಞೆ ತಂದಿದ್ದರು.

ಆ ನಂತರ 2018ರ ಜನವರಿಯಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿ ಹಿನ್ನೆಲೆಯಲ್ಲಿ ಸರ್ಕಾರ ವೇತನ ಪಾವತಿ ಕರಡು ಆದೇಶ ರದ್ದುಪಡಿಸಿ ಆದೇಶ ಹೊರ[illegible]ಸಿತ್ತು ಎಂದು ಆರೋಪಿಸಿದರು. ಮುಖ್ಯಮಂ[illegible] ಎಚ್.ಡಿ. ಕುಮಾರಸ್ವಾಮಿ ಸಮ್ಮುಖದಲ್ಲಿ ನಾ[illegible] ಬೆಂಗಳೂರಿನಲ್ಲಿ ನಡೆಯುವ ಸಭೆಯಲ್ಲಿ ಕಾರ್ಮಿಕ[illegible] ಬೇಡಿಕೆ ಕುರಿತಂತೆ ಸಮಸ್ಯೆ ಬಗೆಹರಿಯದಿದ್ದಲ್ಲಿ ಜೂ. 14ರಿಂದ ಮಂಡ್ಯದ ಸಿಲ್ವರ್ ಜ್ಯೂಬಿಲಿ ಪಾರ್ಕಿನ[illegible] ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ಸಂಘಟನೆ ಜಂಟಿ ಕಾರ್ಯದರ್ಶಿ ಎನ್.ಎಲ್. ಉಮೇಶ್ ಸ್ಪಷ್ಟಪಡಿಸಿದರು.

# ಬೆಂಗಳೂರು

13-6-2018 ಬುಧವಾರ.

# ಗಾರ್ಮೆಂಟ್ಸ್ ಕಾರ್ಮಿಕರ ಮನವೊಲಿಸಿದ ಸಿಎಂ

## ಮುಷ್ಕರದಿಂದ ಹಿಂದೆ ಸರಿದ ಸಂಘಟನೆಗಳು | ಜೂ. 18ರಂದು ಕಾರ್ಖಾನೆಗಳ ಮಾಲಿಕರು, ಕಾರ್ಮಿಕರ ಸಭೆ



**ಪ್ರತಿಭಟನೆಗೆ ಮುಂದಾಗಿದ್ದ ಗಾರ್ಮೆಂಟ್ಸ್ ಕಾರ್ಮಿಕರ ಜೊತೆ ಮುಖ್ಯಮಂತ್ರಿ ಕುಮಾರಸ್ವಾಮಿ ಮಾತುಕತೆ ನಡೆಸಿದರು. ಈ ವೇಳೆ ಕಾರ್ಮಿಕರ ಸಂಘಟನೆ ನಾಯಕಿಯರು ಸೆಲ್ಫಿ ತೆಗೆದುಕೊಂಡಿದ್ದು ಹೀಗೆ.**

**ಬೆಂಗಳೂರು:** ಕನಿಷ್ಠ ವೇತನ ನಿಗದಿಗೆ ಒತ್ತಾಯಿಸಿ ಪ್ರತಿಭಟನೆಗೆ ಮುಂದಾಗಿದ್ದ ಗಾರ್ಮೆಂಟ್ ಕಾರ್ಖಾನೆಗಳ ಕಾರ್ಮಿಕರ ಮನವೊಲಿಸಿದ ಸಿಎಂ ಕುಮಾರಸ್ವಾಮಿ, ಜೂ. 18ರಂದು ಸಮಸ್ಯೆ ಪರಿಹಾರಕ್ಕೆ ಕಾರ್ಖಾನೆಗಳ ಮಾಲಿಕರು ಮತ್ತು ಕಾರ್ಮಿಕರ ಸಭೆ ಕರೆದಿದ್ದಾರೆ.

ಕಾರ್ಖಾನೆಗಳೂ ಉಳಿಯಬೇಕು ಹಾಗೂ ಕಾರ್ಮಿಕರೂ ಬೀದಿ ಪಾಲಾಗಬಾರದು. ಈ ನಿಟ್ಟಿನಲ್ಲಿ ಸೂಕ್ತ ನಿರ್ಧಾರ ಕೈಗೊಳ್ಳುವಲ್ಲಿ ಸರ್ಕಾರ ಮುಕ್ತವಾಗಿದೆ. ಯಾರೂ ಬೀದಿಗಿಳಿದು ಪ್ರತಿಭಟನೆ ಮಾಡಬಾರದು ಎಂಬುದು ಸರ್ಕಾರದ ಉದ್ದೇಶ. ಈ ಮೊದಲೇ ಕಾರ್ಮಿಕರು ಮತ್ತು ಮಾಲಿಕರೊಂದಿಗೆ ಚರ್ಚೆ ನಡೆಸಬೇಕಿತ್ತು. ಅದೇನೇ ಇರಲಿ, ಈಗ ಎಲ್ಲ ರೀತಿಯ ಸಮಸ್ಯೆಗಳನ್ನು ಚರ್ಚಿಸಿ ಬಗೆಹರಿಸಲಾಗುವುದು ಎಂದು ಭರವಸೆ ನೀಡಿದರು.

ಮಾಲಿಕರ ಮೇಲೂ ತುಂಬಾ ಒತ್ತಡ ಹಾಕುವಂತಿಲ್ಲ. ಆಗ, ಕಾರ್ಮಿಕರು ಬೀದಿಗೆ ಬೀಳುವ ಸಾಧ್ಯತೆ ಇದೆ. ಅದೇ ರೀತಿ, ಕಾರ್ಮಿಕರ ಬೇಡಿಕೆಗಳಿಗೂ ಸ್ಪಂದಿಸಬೇಕು. ಇದಕ್ಕಾಗಿ ಈ ಹಿಂದೆ ಅಧಿಸೂಚನೆ ಹೊರಡಿಸಿದಂತೆ ತಿಂಗಳಿಗೆ 1,587 ರೂ. ಕನಿಷ್ಠ ವೇತನ ನೀಡಬೇಕು ಎನ್ನುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಈ ಹಿನ್ನೆಲೆಯಲ್ಲಿ ಮಂಡ್ಯದಲ್ಲಿ ಜೂ. 14ರಂದು ನಡೆಸಲು ನಿರ್ಧರಿಸಿದ್ದ ಪ್ರತಿಭಟನೆಯನ್ನು ತಾತ್ಕಾಲಿಕವಾಗಿ ಕಾರ್ಮಿಕರು ಕೈಬಿಟ್ಟಿದ್ದಾರೆ.

**ಸರ್ಕಾರದಿಂದಲೇ ದ್ರೋಹ; ಆಕ್ರೋಶ:** ಇದಕ್ಕೂ ಮುನ್ನ ಗಾರ್ಮೆಂಟ್ ಮತ್ತು ಟೆಕ್ಸ್‌ಟೈಲ್ ವರ್ಕರ್ಸ್ ಯೂನಿಯನ್ ಅಧ್ಯಕ್ಷೆ ಪ್ರತಿಭಾ ಮಾತನಾಡಿ, ಗಾರ್ಮೆಂಟ್ ಕಾರ್ಮಿಕರಿಗೆ ಕನಿಷ್ಠ ವೇತನ ನಿಗದಿಪಡಿಸುವ ಸಂಬಂಧ 2018ರ ಫೆಬ್ರವರಿಯಲ್ಲಿ ಕರಡು ಆದೇಶವನ್ನು ಹೊರಡಿಸಲಾಗಿತ್ತು. ಅದರಲ್ಲಿ ತಿಂಗಳಿಗೆ 11,587 ರೂ. ವೇತನ ನಿಗದಿಪಡಿಸಲಾಗಿತ್ತು. ಆದರೆ, ಏಕಾಏಕಿ ನಂತರದಲ್ಲಿ ಆ ಕರಡು ಆದೇಶವನ್ನು ಹಿಂಪಡೆಯಲಾಗಿದೆ. ಈ ಮೂಲಕ ಸರ್ಕಾರದಿಂದಲೇ ಕಾರ್ಮಿಕರಿಗೆ ದ್ರೋಹವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇದಕ್ಕೆ ಕಾರ್ಮಿಕ ಇಲಾಖೆ ಅಧಿಕಾರಿಗಳು ಪ್ರತಿಕ್ರಿಯಿಸಿ, ಕೆಲವು ಕಂಪನಿಗಳಲ್ಲಿ ಟೆಕ್ಸ್‌ಟೈಲ್, ಸ್ಪಿನ್ನಿಂಗ್ ಮಿಲ್, ಡೈಯಿಂಗ್ ಮತ್ತು ಪ್ರಿಂಟಿಂಗ್ ಒಂದೇ ಕಡೆ ಇದೆ. ಒಬ್ಬರಿಗೆ ವೇತನ ಹೆಚ್ಚಿಸಿದರೆ, ಉಳಿದವರಿಗೂ ಅನ್ವಯಿಸುತ್ತದೆ. ಇದರಿಂದ ಹೊರೆ ಆಗಲಿದ್ದು, ಈ ನಿರ್ಧಾರದಿಂದ ಹಿಂದೆಸರಿಯುವಂತೆ ಮಾಲಿಕರು ಒತ್ತಾಯಿಸಿದರು. ಹಿಂದಿನ ಸರ್ಕಾರದಸೂಚನೆಯಂತೆಅಧಿಸೂಚನೆಹಿಂಪಡೆಯಲಾಗಿದೆ ಎಂದು ಮುಖ್ಯಮಂತ್ರಿಗೆ ಸಮಜಾಯಿಷಿ ನೀಡಿದರು.

ಆಗ ಕಾರ್ಮಿಕ ಮುಖಂಡರು, ಎಲ್ಲರಿಗೂ ಒಂದೇ ಮಾದರಿಯ ವೇತನ ಈಗಾಗಲೇ ಇದೆ. ಹಾಗಾಗಿ, ಈ ವಾದದಲ್ಲಿ ಹುರುಳಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಮಧ್ಯಪ್ರವೇಶಿಸಿದ ಮುಖ್ಯಮಂತ್ರಿ, 18ರಂದು ನಡೆಯುವ ಸಭೆಯಲ್ಲಿ ಈ ಎಲ್ಲ ಸಮಸ್ಯೆಗಳನ್ನು ಪರಿಹರಿಸಲಾಗುವುದು ಎಂದು ತಿಳಿಸಿದರು.

### ಪ್ರಕರಣ ವಾಪಸ್‌ಗೆ ಆಗ್ರಹ ಪರಿಶೀಲನೆ ಭರವಸೆ

ಪಿಂಚಣಿ ಯೋಜನೆಗೆ ಸಂಬಂಧಿಸಿದಂತೆ ಈ ಹಿಂದೆ 'ನಗರದಲ್ಲಿ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಕಾರ್ಮಿಕರ ವಿರುದ್ಧದ ಪ್ರಕರಣಗಳನ್ನು ಹಿಂಪಡೆಯಬೇಕು. ಕಾರ್ಖಾನೆಗಳಲ್ಲಿನ ಮಹಿಳಾ ಕಾರ್ಮಿಕರ ಮೇಲೆ ದೌರ್ಜನ್ಯಕ್ಕೆ ತಡೆ, ಉಚಿತ ಬಸ್ ಪಾಸ್ ಸೌಲಭ್ಯ ಸೇರಿದಂತೆ ಇದೇ ವೇಳೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಕಾರ್ಮಿಕ ಮುಖಂಡರು ಮನವಿ ಮಾಡಿದರು. ಕಾರ್ಮಿಕರ ವಿರುದ್ಧದ ಪ್ರಕರಣ ಹಿಂಪಡೆಯುವ ಬಗ್ಗೆ ಗೃಹ ಇಲಾಖೆಯೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಹೇಳಿದರು.

# ವೇತನಕ್ಕಾಗಿ ಪೌರಕಾರ್ಮಿಕರ ಧರಣಿ



**ಆರು ತಿಂಗಳಿಂದ ವೇತನ ನೀಡದಿರುವ ಬಿಬಿಎಂಪಿ ಅಧಿಕಾರಿಗಳ ನಿರ್ಲಕ್ಷ್ಯವನ್ನು ಖಂಡಿಸಿ ಪೌರಕಾರ್ಮಿಕರು ಮಹದೇವಪುರ ಬಿಬಿಎಂಪಿ ವಲಯ ಕಚೇರಿ ಮುಂದೆ ಕಸ ಸುರಿದು ಪ್ರತಿಭಟಿಸಿದರು.**

**ಮಹದೇವಪುರ:** ಆರು ತಿಂಗಳಿಂದ ವೇತನ ನೀಡದೆ ಪೌರಕಾರ್ಮಿಕರ ಬದುಕಿನೊಂದಿಗೆ ಚೆಲ್ಲಾಟವಾಡುತ್ತಿರುವ ಬಿಬಿಎಂಪಿ ಅಧಿಕಾರಿಗಳ ನಿರ್ಲಕ್ಷ್ಯವನ್ನು ಖಂಡಿಸಿ ಪೌರಕಾರ್ಮಿಕರು ಪಾಲಿಕೆ ಸದಸ್ಯ ಶ್ರೀಕಾಂತ್ ನೇತೃತ್ವದಲ್ಲಿ ಮಹದೇವಪುರ ಬಿಬಿಎಂಪಿ ವಲಯ ಕಚೇರಿ ಮುಂದೆ ಕಸ ಸುರಿದು ಪ್ರತಿಭಟನೆ ನಡೆಸಿದರು.

ಬಿಬಿಎಂಪಿ ಅಧಿಕಾರಿಗಳು ಆರು ತಿಂಗಳಿನಿಂದ ವೇತನ ನೀಡದೆ ನಮ್ಮ ಬದುಕಿನೊಂದಿಗೆ ಆಟವಾಡುತ್ತಿದ್ದಾರೆ. ಇದೇ ಕೆಲಸ ವನ್ನು ನಂಬಿಕೊಂಡಿರುವ ನಮಗೆ ಒಂದೊತ್ತಿನ ಊಟಕ್ಕೂ ತೊಡಕಾಗಿದೆ. ಶಾಶ್ವತ ಬಯೋಮೆಟ್ರಿಕ್ ಅನ್ನು ತಮ್ಮ ಅಸ್ತ್ರವಾಗಿ ಬಳಸಿಕೊಂಡಿರುವ ಅಧಿಕಾರಿಗಳು ತಮ್ಮ ಜೀವನದೊಂದಿಗೆ ಆಟವಾಡುತ್ತಿದ್ದಾರೆ ಎಂದು ದೂರಿದರು.

ಸುಮಾರು 5-6 ವರ್ಷಗಳಿಂದ 120ಕ್ಕೂ ಹೆಚ್ಚು ಮಂದಿ ದೇವಸಂದ್ರ ವಾರ್ಡ್‌ನಲ್ಲಿ ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡಲಾಗುತ್ತಿತ್ತು ನಮಗೆ ಯಾವುದೇ ಪಿಎಫ್, ಇಎಸ್ಐ ಸೌಲಭ್ಯ ನೀಡಿಲ್ಲ. ಬಯೋಮೆಟ್ರಿಕ್ ವ್ಯವಸ್ಥೆಯ ನಂತರ 48 ಮಂದಿ ಮಾತ್ರ ಕೆಲಸ ಮಾಡುವಂತಾಗಿದೆ. ಸುಮಾರು 65 ಕ್ಕೂ ಹೆಚ್ಚು ಪೌರಕಾರ್ಮಿಕರನ್ನು ತೆಗೆದು ಅವರ ಜೀವನವನ್ನು ಬಲಿ ತೆಗೆದುಕೊಂಡಿದೆ. ನಮಗೆ ಪೂರ್ಣ ವೇತನ ಬರುವವರೆಗೂ ಕೆಲಸಕ್ಕೆ ಹಾಜರಾಗುವುದಿಲ್ಲ ಎಂದು ಎಚ್ಚರಿಸಿದರು.

> **ಈ ಹಿಂದೆ ಘನತ್ಯಾಜ್ಯ ವಿಲೇವಾರಿ ವೇಳೆ ಅಧಿಕಾರಿಗಳು ಸುಳ್ಳು ಲೆಕ್ಕ ತೋರಿಸಿ ದುಪ್ಪಟು ವೇತನ ಪಡೆಯುತ್ತಿದ್ದರು ಇದನ್ನು ಕೊನೆಗಾಣಿಸಲು ಬಯೋಮೆಟ್ರಿಕ್ ವ್ಯವಸ್ಥೆಯನ್ನು ಜಾರಿಗೆ ತಂದಿದೆ ಆದರೆ ಬಯೋ ಮೆಟ್ರಿಕ್ ಹೆಸರಲ್ಲಿ ಅಧಿಕಾರಿಗಳು ಪೌರಕಾರ್ಮಿಕರ ಮೇಲೆ ದೌರ್ಜನ್ಯವೆ ಸಗುತ್ತಿದ್ದಾರೆ. ಕೆಲಸ ಮಾಡಿದವರಿಗೆ ವೇತನ ನೀಡದಿರುವುದು ಎಷ್ಟರ ಮಟ್ಟಿಗೆ ಸರಿ?**
>
> • **ಶ್ರೀಕಾಂತ್**, ಪಾಲಿಕೆ ಸದಸ್ಯ

# ಕಸಾಪಗೆ ಪ್ರತ್ಯೇಕ ಅನುದಾನ ಕೋರಿಕೆ

**ಬೆಂಗಳೂರು:** ಕನ್ನಡ ಸಾಹಿತ್ಯ ಪರಿಷತ್ತಿಗೆ ಬಜೆಟ್‌ನಲ್ಲಿ ಪ್ರತ್ಯೇಕವಾಗಿ ಅನುದಾನ ಘೋಷಣೆ ಮಾಡುವಂತೆ ಸಿಎಂ ಎಚ್.ಡಿ. ಕುಮಾರಸ್ವಾಮಿಯವರಿಗೆ ಪರಿಷತ್ತಿನ ಅಧ್ಯಕ್ಷ ಡಾ. ಮನು ಬಳಿಗಾರ ಮನವಿ ಮಾಡಿದ್ದಾರೆ.

ಮುಖ್ಯಮಂತ್ರಿ ಆದ ಬಳಿಕ ಇದೇ ಮೊದಲ ಬಾರಿಗೆ ಗೃಹ ಕಚೇರಿ ಕೃಷ್ಣಾದಲ್ಲಿ ಮಂಗಳವಾರ ಕುಮಾರಸ್ವಾಮಿಯವರೊಂದಿಗೆ ಸೌಹಾರ್ದ ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದ ಮನು ಬಳಿಗಾರ, ಇದೇ ವೇಳೆ ಕಸಾಪ ಚಟುವಟಿಕೆಗಳಿಗೆ ಸರ್ಕಾರ ನೀಡುತ್ತಿರುವ ಅನುದಾನವನ್ನು ಈ ವರ್ಷದ ಬಜೆಟ್‌ನಲ್ಲಿ ಪ್ರತ್ಯೇಕವಾಗಿ ಘೋಷಿಸಬೇಕೆಂದು ಮನವಿ ಮಾಡಿದರು.

ತಮ್ಮ ಅಧಿಕಾರವಧಿಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಶ್ರೀಮಂತವಾಗಲೆಂದು ಕುಮಾರಸ್ವಾಮಿಯವರಿಗೆ ಹಾರೈಸಿದ ಅವರು, ಹಿಂದೆ ಮುಖ್ಯಮಂತ್ರಿಯಾಗಿದ್ದಾಗ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಹೆಚ್ಚಿನ ಅನುದಾನ ನೀಡಿದ್ದನ್ನು ...



ಯನ್ನು ಆಲಿಸಿದ ಸಿಎಂ, ನನ್ನ ಸರ್ಕಾರ ಕನ್ನಡ, ... ಭರವಸೆ ನೀಡಿದರು ಎಂದು ಮನು ಬಳಿಗಾರ

13 ಜೂನ್ 2018

# 18ಕ್ಕೆ ಗಾರ್ಮೆಂಟ್ ಕಾರ್ಖಾನೆಗಳ ನೌಕರರ ಜತೆಗೆ ಎಚ್‌ಡಿಕೆ ಸಭೆ

ಪ್ರಜಾವಾಣಿ ವಾರ್ತೆ



ಕುಮಾರಸ್ವಾಮಿ ಅವರನ್ನು ಸಿದ್ಧ ಉಡುಪು ಕಾರ್ಖಾನೆಗಳ ನೌಕರರ ಪ್ರತಿನಿಧಿಗಳು ಮಂಗಳವಾರ ಭೇಟಿ ಮಾಡಿದರು. ವೆಂಕಟರಮಣಪ್ಪ ಇದ್ದಾರೆ

**ಬೆಂಗಳೂರು:** ಸಿದ್ಧ ಉಡುಪು ಕಾರ್ಖಾನೆಗಳ ನೌಕರರಿಗೆ ಕನಿಷ್ಠ ವೇತನ ಹಾಗೂ ಇತರ ಸೌಲಭ್ಯವನ್ನು ಒದಗಿಸುವ ಸಂಬಂಧ ಇದೇ 18ರಂದು ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ಸಭೆ ನಿಗದಿಪಡಿಸಿದ್ದಾರೆ.

ಈ ಸಭೆಯಲ್ಲಿ ಸಿದ್ಧ ಉಡುಪು ಕಾರ್ಖಾನೆಗಳ ಮಾಲೀಕರ ಸಂಘ ಹಾಗೂ ನೌಕರರ ಸಂಘದ ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ.

ಗಾರ್ಮೆಂಟ್ಸ್ ಹಾಗೂ ಟೆಕ್ಸ್‌ಟೈಲ್ ನೌಕರರ ಸಂಘದ ಪ್ರತಿನಿಧಿಗಳು ಮುಖ್ಯಮಂತ್ರಿ ಗೃಹ ಕಚೇರಿ 'ಕೃಷ್ಣಾ'ದಲ್ಲಿ ಕುಮಾರಸ್ವಾಮಿ ಅವರನ್ನು ಮಂಗಳವಾರ ಭೇಟಿ ಮಾಡಿ ತಮ್ಮ ಅಹವಾಲುಗಳನ್ನು ಹೇಳಿಕೊಂಡರು.

'ಸಿದ್ಧ ಉಡುಪು ಕ್ಷೇತ್ರದಲ್ಲಿ ಬೆಂಗಳೂರು ಇಡೀ ದೇಶದಲ್ಲಿ ಹೆಸರಾಗಿದೆ. ಇಲ್ಲಿ ತಯಾರಾಗುತ್ತಿರುವ ವಸ್ತ್ರಗಳು ಅತ್ಯುತ್ತಮ ಮಟ್ಟ ಹಾಗೂ ವಿನ್ಯಾಸಗಳಿಂದ ಕೂಡಿವೆ. ಜಗತ್ತಿನ ನಾನಾ ದೇಶಗಳಿಗೆ ಇಲ್ಲಿ ತಯಾರಿಸಲಾದ ಉಡುಪುಗಳು ರಫ್ತಾಗುತ್ತಿವೆ. ಆದರೆ, ಈ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸುತ್ತಿರುವವರ ಬದುಕಿನ ಗುಣಮಟ್ಟ ಸುಧಾರಿಸಿಲ್ಲ. ಇವರಿಗೆ ಕನಿಷ್ಠ ವೇತನ ಹಾಗೂ ಅಗತ್ಯ ಅನುಕೂಲಗಳನ್ನು ಒದಗಿಸದಿರುವುದೇ ಇದಕ್ಕೆ ಕಾರಣ' ಎಂದು ಸಂಘದ ಪ್ರತಿನಿಧಿಗಳು ತಿಳಿಸಿದರು.

ಕುಮಾರಸ್ವಾಮಿ, 'ಎರಡೂ ಕಡೆಯ ಅಭಿಪ್ರಾಯ ಆಲಿಸಿ ಸೂಕ್ತ ನಿರ್ಧಾರ ಕೈಗೊಳ್ಳುತ್ತೇನೆ' ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕಾರ್ಮಿಕ ಸಚಿವ ವೆಂಕಟರಮಣಪ್ಪ, ಮುಖ್ಯಮಂತ್ರಿ ಅವರ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎನ್. ಲಕ್ಷ್ಮಿನಾರಾಯಣ, ಕಾರ್ಮಿಕ ಇಲಾಖೆಯ ಕಾರ್ಯದರ್ಶಿ ಅಮ್ಲಾನ್ ಆದಿತ್ಯ ಬಿಸ್ವಾಸ್, ಗಾರ್ಮೆಂಟ್ಸ್ ಹಾಗೂ ಟೆಕ್ಸ್‌ಟೈಲ್ ನೌಕರರ ಸಂಘದ ಅಧ್ಯಕ್ಷೆ ಪ್ರತಿಭಾ, ಸಂಘದ ಕಾನೂನು ಸಲಹೆಗಾರ ಜೈರಾಮ್ ಇದ್ದರು.